**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರು ನಿಯಮ 72 ರಡಿಮೇರೆಗೆ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಉತ್ತರ.**

*******

**ವಿಷಯ: ರಾಜ್ಯ ಸರ್ಕಾರಕ್ಕೆ ಮೂರು ವರ್ಷಗಳ ಹಿಂದೆ ಕೋಟ್ಯಾಂತರ ರೂ. ಆದಾಯ ತಂದುಕೊಡುತ್ತಿದ್ದ ಎಪಿಎಂಸಿಗಳು ಈಗ ಕಛೇರಿ ವಿದ್ಯುತ್ ಮತ್ತು ನೀರಿನ ಶುಲ್ಕ ಪಾವತಿಸಲಾಗದೆ ಮುಚ್ಚುವ ಸ್ಥಿತಿ ತಲುಪಿವೆ. ಹಿಂದಿನ ರಾಜ್ಯ ಸರ್ಕಾರ ಜಾರಿಗೊಳಿಸಿದ ಎಪಿಎಂಸಿ 2020 ತಿದ್ದುಪಡಿ ಕಾಯಿದೆ ಬಳಿಕ ರಾಜ್ಯದ 162 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು (ಎಪಿಎಂಸಿ) ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ. ತಾಲ್ಲೂಕಿನಾದ್ಯಂತ ಇದ್ದ ಅವುಗಳ ವ್ಯಾಪ್ತಿಯನ್ನು ಈಗ ಎಪಿಎಂಸಿ ಯಾರ್ಡ್‌ಗಳಿಗೆ ಸೀಮಿತಗೊಳಿಸಲಾಗಿದೆ. ಅಂದರೆ ಯಾರ್ಡ್ ಹೊರಗಿನ ವ್ಯಾಪಾರ ವಹಿವಾಟನ್ನು ಮುಕ್ತಗೊಳಿಸಿ ಎಪಿಎಂಸಿ ಗಳ ಹಸ್ತಕ್ಷೇಪವನ್ನು ತಪ್ಪಿಸಲಾಗಿದೆ. ಅಲ್ಲದೆ ವರ್ತಕರಿಗೆ ವಿಧಿಸಲಾಗುತ್ತಿದ್ದ ಸೆಸ್ ಶೇ.1.5 ರಿಂದ ಶೇ.0.60ಕ್ಕೆ ಇಳಿಸಲಾಗಿದೆ. ಎಪಿಎಂಸಿಯಿಂದ ಹೊರಗೆ ಮುಕ್ತ ವ್ಯಾಪಾರ ಇರುವುದರಿಂದ ವರ್ತಕರು ಹೆಸರಿಗಷ್ಟೇ ಎಪಿಎಂಸಿ ಒಳಗೆ ಮಳಿಗೆಗಳನ್ನು ತೆರೆದುಕೊಂಡು ತಮ್ಮ ವಹಿವಾಟನ್ನು ಸಂಪೂರ್ಣವಾಗಿ ಹೊರಗಡೆ ನಡೆಸುತ್ತಿದ್ದಾರೆ. ಈ ವಿಷಯವು ರೈತರ ಹಿತದೃಷ್ಟಿಯಿಂದ ಮಹತ್ವದಾಗಿರುತ್ತದೆಂದು ಪ್ರಸ್ತಾಪಿಸಿರುವ ಬಗ್ಗೆ.**

******

ಹಿಂದಿನ ರಾಜ್ಯ ಸರ್ಕಾರವು ರೈತ ಬೆಳೆಗಾರರಿಗೆ ಹತ್ತಿರದಲ್ಲಿಯೇ ಸರಳೀಕೃತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವ ದೃಷ್ಟಿಯಿಂದ ಸುಗ್ರೀವಾಜ್ಞೆ ಮೂಲಕ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966ರ ಕಲಂ 8(2), 8(3) ಹಾಗೂ 117ಕ್ಕೆ ತಿದ್ದುಪಡಿ ಮಾಡಿ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆ ಪ್ರಾಂಗಣದಲ್ಲಿಯೇ ಮಾರಾಟ ಹಾಗೂ ಖರೀದಿಸಬೇಕೆಂಬ ನಿರ್ಬಂಧ ತೆರವುಗೊಳಿಸಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ನಿಯಂತ್ರಣವನ್ನು ಮಾರುಕಟ್ಟೆ ಪ್ರಾಂಗಣಗಳಿಗೆ ಮಾತ್ರ ಸೀಮಿತಗೊಳಿಸಲಾಗಿದೆ. ಮಾರುಕಟ್ಟೆ ಪ್ರಾಂಗಣಗಳನ್ನು ಹೊರತುಪಡಿಸಿದ ಮಾರುಕಟ್ಟೆ ಕ್ಷೇತ್ರದಲ್ಲಿ ನಡೆಯುವ ವ್ಯಾಪಾರ ವಹಿವಾಟಿನ ಮೇಲೆ ಮಾರುಕಟ್ಟೆ ಸಮಿತಿಗಳಿಗೆ ಯಾವುದೇ ನಿಯಂತ್ರಣ ಇರುವುದಿಲ್ಲ.

ಮಾರುಕಟ್ಟೆ ಸಮಿತಿಗಳ ಮೂಲ ಆದಾಯವು ಮಾರುಕಟ್ಟೆ ಶುಲ್ಕವಾಗಿದ್ದು, ಮಾರುಕಟ್ಟೆ ಕಾಯ್ದೆ ತಿದ್ದುಪಡಿ ಪೂರ್ವದಲ್ಲಿ ಅಧಿಸೂಚಿತ ಕೃಷಿ ಉತ್ಪನ್ನಗಳ ಮೇಲೆ ಪ್ರತಿ ರೂ.100/-ಕ್ಕೆ ಶೇ.1.5 ರಂತೆ ಖರೀದಿದಾರರಿಂದ ಮಾರುಕಟ್ಟೆ ಶುಲ್ಕವನ್ನು ಹಾಗೂ ಶೇ.1 ರಂತೆ ಬಳಕೆದಾರರ ಶುಲ್ಕವನ್ನು ಮಾರುಕಟ್ಟೆ ಸಮಿತಿಗಳು ಆಕರಿಸಲು ಅವಕಾಶಿಸಲಾಗಿತ್ತು. ಮಾರುಕಟ್ಟೆ ಶುಲ್ಕದಿಂದ ಬರುವ ಆದಾಯದಲ್ಲಿ ಮಾರುಕಟ್ಟೆ ಪ್ರಾಂಗಣಕ್ಕಾಗಿ ಭೂಸ್ವಾಧೀನ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮತ್ತು ಮಾರುಕಟ್ಟೆ ಕಾಯ್ದೆಯಲ್ಲಿ ನಿಗಧಿಪಡಿಸಿರುವ ಶಾಸನಬದ್ಧ ವಂತಿಕೆಗಳು ಹಾಗೂ ಜವಾಬ್ದಾರಿಗಳನ್ನು ನಿರ್ವಹಿಸಲು ಬಳಸಲಾಗುತ್ತಿತ್ತು.

ಮಾರುಕಟ್ಟೆ ಕಾಯ್ದೆ ತಿದ್ದುಪಡಿ ನಂತರದಲ್ಲಿ, ಲೈಸೆನ್ಸ್ ಪಡೆದು ಮಾರುಕಟ್ಟೆ ಪ್ರಾಂಗಣಗಳಲ್ಲಿ ವ್ಯಾಪಾರ ವಹಿವಾಟು ನಡೆಸುವ ಪೇಟೆ ಕಾರ್ಯಕರ್ತರಿಗೂ ಸಮಾನ ಅವಕಾಶ ಕಲ್ಪಿಸಿಕೊಡುವ ನಿಟ್ಟಿನಲ್ಲಿ, ರಾಜ್ಯ ಸರ್ಕಾರವು ಮಾರುಕಟ್ಟೆ ಸಮಿತಿಗಳು ಆಕರಿಸುತ್ತಿದ್ದ ಮಾರುಕಟ್ಟೆ ಶುಲ್ಕ/ಬಳಕೆದಾರರ ಶುಲ್ಕದ ದರವನ್ನು ಶೇ.1.5 ರಿಂದ ಶೇ.0.60ಕ್ಕೆ ನಿಗದಿಪಡಿಸಲಾಗಿದೆ.

ಕಳೆದ 05 ವರ್ಷಗಳಲ್ಲಿ ಮಾರುಕಟ್ಟೆ ಸಮಿತಿಗಳು ಆಕರಿಸಿದ ಮಾರುಕಟ್ಟೆ ಶುಲ್ಕ/ಬಳಕೆದಾರರ ಶುಲ್ಕದ ವಿವರ ಕೆಳಗಿನಂತ್ತಿದೆ.

| ವರ್ಷ | ಆಕರಣೆಯಾದ ಒಟ್ಟು ಶುಲ್ಕ (ರೂ.ಕೋಟಿಗಳಲ್ಲಿ) | ಶೇಕಡವಾರು |
|---|---|---|
| 2018-19 | 570 | - |
| 2019-20 | 620 | +9 |
| 2020-21 | 300 | - 52 |
| 2021-22 | 200 | -68 |
| 2022-23 | 194 | -69 |

**ಶೇ.0.60ಕ್ಕೆ (60 ಪೈಸೆಗೆ) ಮರು ಹಂಚಿಕೆ ಮಾಡಿ ನಿಗಧಿಪಡಿಸಿದ ದರ**

1. ಆವರ್ತ ನಿಧಿ - ರೂ.10 ಪೈಸೆ.
2. ಮಂಡಳಿ ವಂತಿಕೆ - ರೂ.05 ಪೈಸೆ.
3. ರೆಮ್ಸ್ ವಂತಿಕೆ - ರೂ.01 ಪೈಸೆ.
4. ಪ್ರಾಂಗಣದಲ್ಲಿ ಮೂಲಭೂತ ಸೌಕರ್ಯ, ಪ್ರಾಂಗಣ ನಿರ್ವಹಣೆ, ಆಡಳಿತ ವೆಚ್ಚ - ರೂ.44 ಪೈಸೆ.

ಕಾಯ್ದೆ ತಿದ್ದುಪಡಿ ನಂತರದಲ್ಲಿ ಮಾರುಕಟ್ಟೆ ಶುಲ್ಕ ಸಂಗ್ರಹಣೆಯಲ್ಲಿ ಗಣನೀಯವಾಗಿ ಇಳಿಕೆಯಾಗಿರುವುದರಿಂದ, ಮಾರುಕಟ್ಟೆ ಶುಲ್ಕದ ದರದ ರೂ.44 ಪೈಸೆಯಲ್ಲಿ ಪ್ರಾಂಗಣದಲ್ಲಿ ಮೂಲಭೂತ ಸೌಕರ್ಯ ಕಲ್ಪಿಸುವುದು, ಭದ್ರತೆ, ಸ್ವಚ್ಛತೆ, ಆಡಳಿತ ನಿರ್ವಹಣೆ ಮಾಡಲು ಆರ್ಥಿಕವಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಕಷ್ಟಸಾಧ್ಯವಾಗಿರುತ್ತದೆ.

ಮುಂದುವರೆದು, ಮಾರುಕಟ್ಟೆ ಪ್ರಾಂಗಣಗಳನ್ನು ಹೊರತುಪಡಿಸಿದ ಮಾರುಕಟ್ಟೆ ಕ್ಷೇತ್ರದಲ್ಲಿ ಅಧಿಸೂಚಿತ ಕೃಷಿ ಉತ್ಪನ್ನಗಳ ನಿಯಂತ್ರಣಕ್ಕೆ ಯಾವುದೇ ವ್ಯವಸ್ಥೆ ಇಲ್ಲದೆ ರೈತರು ಶೋಷಣೆಗೆ ಒಳಗಾಗುವ ಸಾಧ್ಯತೆಗಳು ಹೆಚ್ಚಾಗಿವೆ. ಮಾರುಕಟ್ಟೆ ಪ್ರಾಂಗಣದ ಹೊರಗಡೆ ಆನ್‌ಲೈನ್ ವ್ಯವಸ್ಥೆ ಇಲ್ಲದೆ ಇರುವುದರಿಂದ ರೈತರು ಬೆಳೆದ ಉತ್ಪನ್ನಗಳಿಗೆ ಸ್ಪರ್ಧಾತ್ಮಕತೆ ಏರ್ಪಡದೆ ಯೋಗ್ಯ ಧಾರಣೆ ಸಿಗುವ ಸಾಧ್ಯತೆಗಳು ಕಡಿಮೆಯಾಗಿದೆ. ರೈತರಿಗೆ ತಾವು ಮಾರಾಟ ಮಾಡಿದ ಉತ್ಪನ್ನದ ಮೌಲ್ಯ ಪಾವತಿ ಖಾತರಿ ವ್ಯವಸ್ಥೆ ಇಲ್ಲದಂತಾಗಿದೆ. ಮಾರುಕಟ್ಟೆ ಪ್ರಾಂಗಣದ ಹೊರಗಡೆ ವರ್ತಕರ ಹಾಗೂ ರೈತರ ನಡುವೆ ವಿವಾದಗಳು ಉದ್ಭವಿಸಿದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಇತ್ಯರ್ಥಪಡಿಸಲು ಅವಕಾಶವಿರುವುದಿಲ್ಲ. ಮಾರುಕಟ್ಟೆ ಸಮಿತಿಗಳು ಆರ್ಥಿಕವಾಗಿ ಕುಂಠಿತಗೊಂಡಿದ್ದು, ಮಾರುಕಟ್ಟೆ ಪ್ರಾಂಗಣಗಳಲ್ಲಿ ಕೇಂದ್ರ, ರಾಜ್ಯ ಸರ್ಕಾರದ ಅನುದಾನ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ನಿಧಿಯಿಂದ ಹಣ ವಿನಿಯೋಗಿಸಿ ಕಲ್ಪಿಸಲಾಗಿರುವ ಸುಸಜ್ಜಿತ ಮೂಲಭೂತ ಸೌಲಭ್ಯಗಳ ನಿರ್ವಹಣೆ ಮಾಡಲು ಸಾಧ್ಯವಾಗದೆ ಶಿಥಿಲಾವಸ್ಥೆಗೆ ತಲುಪುವ ಸಾಧ್ಯತೆಗಳಿರುತ್ತವೆ.

ಆದ್ದರಿಂದ, ರಾಜ್ಯ ಸರ್ಕಾರವು ಎಲ್ಲಾ ಅಂಶಗಳನ್ನು ಪರಿಗಣಿಸಿ ಮಾರುಕಟ್ಟೆ ಪ್ರಾಂಗಣಗಳ ಹೊರಗಡೆ ಮಾರುಕಟ್ಟೆ ಕ್ಷೇತ್ರದಲ್ಲಿ ನಡೆಯುವ ವ್ಯಾಪಾರ ವಹಿವಾಟಿನ ಮೇಲೆ ಈ ಮೊದಲಿನಂತೆ ನಿಯಂತ್ರಣವನ್ನು ಹೊಂದುವುದು ರೈತ ಬೆಳೆಗಾರರ ಹಿತದೃಷ್ಟಿಯಿಂದ ಅವಶ್ಯಕತೆ ಇರುವುದರಿಂದ, ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 8(2), ಕಲಂ 8(3) ಹಾಗೂ ಕಲಂ 117ಕ್ಕೆ ತಿದ್ದುಪಡಿ ಮಾಡಿ ಪುನರ್ ಸ್ಥಾಪಿಸಲು ದಿನಾಂಕ:15.06.2023 ರಂದು ಸಚಿವ ಸಂಪುಟದ ಅನುಮೋದನೆ ದೊರೆತಿದ್ದು, ಮುಂದಿನ ಕ್ರಮಕ್ಕಾಗಿ ಸಂಸದೀಯ ವ್ಯವಹಾರಗಳು ಶಾಸನ ರಚನೆ ಇಲಾಖೆಗೆ ಕಳುಹಿಸಲಾಗಿದೆ.

(ಸಂಖ್ಯೆ: ಸಿಒ 117 ಎಂಆರ್‌ಇ 2023)

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು